ಪೊಲೀಸ್ ಸಿಬ್ಬಂದಿ ಕೊರತೆ

30(153); ಶ್ರೀ ಚೆಲುವರಾಯಸ್ವಾಮಿ ಎನ್ (ನಾಗಮಂಗಲ)

ಅ) ಮಂಡ್ಯ ಜಿಲ್ಲೆಯಲ್ಲಿರುವ ಪೊಲೀಸ್ ಠಾಣೆ ಹಾಗೂ ಉಪ ಠಾಣೆಗಳ ಸಂಖ್ಯೆ ಎಷ್ಟು; ಈ ಠಾಣೆಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಠಾಣೆಗಳಲ್ಲಿ ಖಾಲಿ ಇರುವ ಪೊಲೀಸ್ ಅಧಿಕಾರಿ, ಸಿಬ್ಬಂದಿ ವರ್ಗ ಮತ್ತು ಲಿಪಿಕ ವರ್ಗದ ಸಿಬ್ಬಂದಿಯ ಸಂಖ್ಯೆ ಎಷ್ಟು (ಠಾಣೆ, ಕಛೇರಿವಾರು ವಿವರ ಒದಗಿಸುವುದು)

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು;

ಇ) ಕಳೆದ ಜನವರಿ ತಿಂಗಳಿಂದ ನವೆಂಬರ್ ಅಂತ್ಯದವರೆಗೆ ಮಂಡ್ಯ ನಗರ ಸೇರಿದಂತೆ, ಜಿಲ್ಲೆಯಲ್ಲಿ ಘಟಿಸಿರುವ ಅಪರಾಧಗಳ ಸಂಖ್ಯೆ ಎಷ್ಟು (ವಿವರ ಒದಗಿಸುವುದು); ಸಿಬ್ಬಂದಿ ಕೊರತೆಯಿಂದ ಅಪರಾಧಗಳ ಸಂಖ್ಯೆಯಲ್ಲಿ ಹೆಚ್ಚಳ ಹಾಗೂ ತನಿಖೆಯಲ್ಲಿ ವಿಳಂಬ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಇದನ್ನು ಪರಿಹರಿಸಲು ಕೈಗೊಂಡಿರುವ ಕ್ರಮಗಳೇನು;

ಉ) ಜಿಲ್ಲೆಯ ಯಾವ್ಯಾವ ಊರುಗಳಲ್ಲಿ ಪೊಲೀಸ್ ಠಾಣೆಗಳ ನಿರ್ಮಾಣ ಹಾಗೂ ದುರಸ್ತಿ ಮತ್ತು ಪೊಲೀಸ್ ಸಿಬ್ಬಂದಿ ವಸತಿಗೃಹಗಳನ್ನು ನಿರ್ಮಾಣ ಮಾಡಲಾಗುತ್ತಿದೆ. (ವಿವರ ಒದಗಿಸುವುದು)?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) ಮಂಡ್ಯ ಜಿಲ್ಲೆಯಲ್ಲಿ ಒಟ್ಟು 30 ಪೊಲೀಸ್ ಠಾಣೆಗಳು ಹಾಗೂ 11 ಉಪ–ಠಾಣೆಗಳು ಇರುತ್ತವೆ.

ಈ ಠಾಣೆಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಈ ಠಾಣೆಗಳಲ್ಲಿ ಖಾಲಿ ಇರುವ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದ ಸಂಖ್ಯೆ ಒಟ್ಟು 212 ಆಗಿದ್ದು, ವಿವರಗಳನ್ನು ಅನುಬಂಧ–ಅ ರಲ್ಲಿ ನೀಡಲಾಗಿದೆ.

ಆ) 2014ರ ಸಾಲಿನಲ್ಲಿ ಪೊಲೀಸ್ ಕಾನ್ಸ್‌ಟೇಬಲ್‌ಗಳನ್ನು ಭರ್ತಿ ಮಾಡಲು ಆದೇಶ ನೀಡಿದ್ದು ದಿನಾಂಕ: 07.05.2014 ರಿಂದ 13.06.2014ವರೆಗೆ 188 ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದ್ದು, ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

ಇ) 2014ನೇ ಜನವರಿ ತಿಂಗಳಿಂದ 2014ನೇ ನವೆಂಬರ್ ಅಂತ್ಯದವರೆಗೆ ಮಂಡ್ಯ ನಗರ ಸೇರಿದಂತೆ, ಜಿಲೆಯಲ್ಲಿ ಒಟ್ಟು 8048 ಅಪರಾಧ ಪ್ರಕರಣಗಳು ವರದಿಯಾಗಿರುತ್ತದೆ. ವಿವರಗಳನ್ನು ಅನುಬಂಧ–ಆ ರಲ್ಲಿ ನೀಡಲಾಗಿದೆ

ಜಿಲ್ಲೆಯಲ್ಲಿ ಹಾಲಿ ಇರುವ ಸಿಬಂದಿಗಳಿಂದಲೇ ತನಿಖೆಯನ್ನು ನಡೆಸಿ ಪ್ರಕರಣಗಳನ್ನು ಪತ್ತೆ ಮಾಡುವುದು ಮತ್ತು ಅಪರಾಧ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ.

ಈ) ಸಿಬ್ಬಂದಿ ಕೊರತೆಯನ್ನು ಪರಿಹರಿಸಲು 2014ನೇ ಸಾಲಿನಲ್ಲಿ 188 ಪೊಲೀಸ್ ಸಿಬ್ಬಂದಿಗಳ ಆಯ್ಕೆ ಪ್ರಕ್ರಿಯೆ ನಡೆಯುತ್ತಿದ್ದು, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಉ) ಜಿಲ್ಲೆಯ ಯಾವ್ಯಾವ ಊರುಗಳಲ್ಲಿ ಪೊಲೀಸ್ ಠಾಣೆಗಳ ನಿರ್ಮಾಣ ಹಾಗೂ ದುರಸ್ತಿ ಮತ್ತು ಪೊಲೀಸ್ ಸಿಬ್ಬಂದಿ ವಸತಿಗೃಹಗಳನ್ನು ನಿರ್ಮಾಣ ಮಾಡಲಾಗುತ್ತಿದೆ ಎಂಬ ವಿವರಗಳನ್ನು ಅನುಬಂಧ–ಇ ರಲ್ಲಿ ಒದಗಿಸಿದೆ.